23

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ರವರು ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಉತ್ತರ**

ಜನನ ಮರಣ ನೋಂದಣಿ ಅಧಿನಿಯಮ 1969 ರ 7(1) ರ ಪ್ರಕಾರ ಗ್ರಾಮೀಣ ಪ್ರದೇಶದ ಕಂದಾಯ ಗ್ರಾಮಗಳಿಗೆ ಜನನ ಮರಣ ನೋಂದಣಿ ಕಾರ್ಯವನ್ನು ನಿರ್ವಹಿಸಲು ಗ್ರಾಮಲೆಕ್ಕಿಗರನ್ನು ಜನನ ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಿಸಲಾಗಿ ಅದರಂತೆ ಅವರುಗಳು ಗ್ರಾಮೀಣ ಪ್ರದೇಶದಲ್ಲಿ ಜನನ ಮರಣ ನೋಂದಣಿ ಕಾರ್ಯವನ್ನು ನಿರ್ವಹಿಸುತ್ತಿದ್ದರು. ಗ್ರಾಮೀಣ ಜನರು ನೋಂದಾಯಿಸಲ್ಪಟ್ಟ ಜನನ ಮರಣ ಪ್ರಮಾಣಪತ್ರಗಳನ್ನು ಪಡೆಯಲು ನಾಡಕಛೇರಿಗೆ ಹಾಗೂ ತಾಲ್ಲೂಕು ಕಛೇರಿಗೆ ಹೋಗುವುದನ್ನು ತಪ್ಪಿಸಿ ಅವರುಗಳಿಗೆ ಗ್ರಾಮ ಪಂಚಾಯತಿ ಮಟ್ಟದಲ್ಲೇ ಪ್ರಮಾಣ ಪತ್ರಗಳನ್ನು ಪಡೆಯಲು ಅವಕಾಶ ಕಲ್ಪಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಸೂಚನೆ ಸಂಖ್ಯೆ ಗ್ರಾಅಪ 555 ಗ್ರಾಪಂಅ 2020 ದಿನಾಂಕ 16.07.2020 ರಂದು ಇ-ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಿದ ಜನನ ಮರಣ ಪ್ರಮಾಣಪತ್ರಗಳನ್ನು ವಿತರಿಸಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ವಿತರಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಇ-ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಲ್ಪಟ್ಟ ಜನನ ಮರಣ ಪ್ರಮಾಣಪತ್ರಗಳನ್ನು ಬಾಪೂಜಿ ಸೇವಾಕೇಂದ್ರಗಳ ಮೂಲಕ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ವಿತರಿಸುತ್ತಿದ್ದಾರೆ. ವಿವರಗಳು ಈ ಕೆಳಕಂಡಂತಿದೆ.

| ವಿತರಿಸಲಾದ ಪ್ರಮಾಣ ಪತ್ರಗಳು | | | |
|---|---|---|---|
| ವರ್ಷ | ಜನನ | ಮರಣ | ಒಟ್ಟು |
| 2020 | 164 | 210 | 374 |
| 2021 | 340 | 664 | 1004 |
| 2022 | 104 | 191 | 295 |
| **ಒಟ್ಟು** | **608** | **1065** | **1673** |

ಇದಲ್ಲದೆ, ಗ್ರಾಮೀಣ ಪ್ರದೇಶದಲ್ಲಿ ನಾಗರೀಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಹಾಗೂ ಘಟಿಸುವ ಶೇ.100 ರಷ್ಟು ಜನನ ಮರಣ ನೋಂದಣಿ ಘಟನೆಗಳನ್ನು ದಾಖಲಿಸಲು ಹಾಗೂ ನಾಗರೀಕರು ಸ್ಥಳೀಯವಾಗಿ ಗ್ರಾಮಪಂಚಾಯತಿ ಮಟ್ಟದಲ್ಲಿಯೇ ಜನನ ಮರಣ ಪ್ರಮಾಣ ಪತ್ರಗಳನ್ನು ಪಡೆಯಲು ಅನುಕೂಲವಾಗುವಂತೆ ಜನನ ಮರಣ ನೋಂದಣಿ ಅಧಿನಿಯಮ 1969ರ 7(1)ರನ್ವಯ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ನೋಂದಣಾಧಿಕಾರಿಗಳನ್ನಾಗಿ ಹಾಗೂ ಪ್ರಕರಣ 7(5) ರನ್ವಯ ಗ್ರಾಮ ಲೆಕ್ಕಿಗರನ್ನು ಜನನ ಮರಣ ಉಪ ನೊಂದಣಾಧಿಕಾರಿಗಳನ್ನಾಗಿ ನೇಮಿಸಿ ಸರ್ಕಾರದ ಆದೇಶ ಸಂಖ್ಯೆ ಪಿಡಿಎಸ್ 02 ಎಸ್‌ಎಸ್‌ಎಂ 2022, ದಿನಾಂಕ 22.02.2022 ರಲ್ಲಿ ಆದೇಶ ಹೊರಡಿಸಲಾಗಿದೆ.

ಇದಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ದಿನಾಂಕ 15.05.2023ರ ಕೋರಿಕೆ ಮೇರೆಗೆ ಸರ್ಕಾರದ ಆದೇಶ ಸಂಖ್ಯೆ ಪಿಡಿಎಸ್ 02 ಎಸ್‌ಎಸ್‌ಎಂ 2022 ದಿನಾಂಕ 07.07.2023 ರಲ್ಲಿ ಜನನ ಮರಣ ಅಧಿನಿಯಮ 1969 ರ ಪ್ರಕರಣ 7(5) ರನ್ವಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಉಪನೋಂದಣಾಧಿಕಾರಿಗಳನ್ನಾಗಿ ಹಾಗೂ ಪ್ರಕರಣ 7(1) ರನ್ವಯ ಗ್ರಾಮ ಲೆಕ್ಕಿಗರನ್ನು ಜನನ ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಪಿಡಿಎಸ್ 58 ಎಸ್‌ಎಸ್‌ಎಂ 2023

(ಡಿ.ಸುಧಾಕರ್)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು